ಫಾರೆಸ್ಟ್ ಇಲಾಖಾ.

ಇಸ್ತಿಹಾರ್.

ಮೈಸೂರು ವ ಕೊಡಗು ಸೀಮೆಗಳಲ್ಲಿ ಉತ್ಪತ್ತಿಯಾದ ಬಾಬತು ಸಂದಲ್‌ಮರದ ಸಾಲೀಯಾನಾ ಹರಾಜ್‌ಗಳು ಈ ಕೆಳಗೆ ಕಂಡ ತಾರೀಖುಗಳೊಳಗೂ ಸ್ಥಳಗಳಲ್ಲಿಯೂ ನಡಿಸಲ್ಪಡುವವು.

ಬೆಂಗಳೂರು, 1ನೇ ಡಿಸಂಬರ್ ,, ಹೆಚ್ಚು ಕಡಮೆ 100 ಟ್ನ್‌ಗಳು.
ಫೈಜರ್‌ಪೇಟೆ 18ನೇ ,, ,, 80 ,,

ಹರಾಜ್ ನಿಬಂಧನೆ—ಹರಾಜ್‌ವೊಬಲಗ್ ಪೈಕೀ ಸೇಕಡಾ ಇಪ್ಪತ್ತೈದು ಪ್ರಕಾರ, ಹರಾಜ್ ತಾರೀಖು ಲಗಾಯತು ಮೂರುದಿನಗಳೊಳಗಾಗಿ ಪಾವತೀಮಾಡತಕ್ಕದ್ದು. ಬಾಕೀವೊಬಲಗನ್ನು ಹರಾಜ್‌ತಾರೀಖುವೊದಲು 90 ದಿನಗಳೊಳಗಾಗಿ ಪಾವತೀಮಾಡತಕ್ಕದ್ದು. ಇತರ ಷರತ್ತುಗಳೂ ದಂಡಗಳೂ 1874ನೇ ನವಂಬರ್ 28ನೇ ಮುಕ್ತಂ 47ನೇ ನಂಬರು ಮೈಸೂರು ಗಜೆಟ್‌ನಲ್ಲಿ ಕಾಣಬರುವದು. ಹರಾಜ್ ಆರಂಭವಾಗುವದಕ್ಕೆ ಮುಂಚಿತವಾಗಿ ಪ್ರತಿ ಕೋಠೀಬಳಿಯಲ್ಲೂ ಸದರೀ ನಿಬಂಧನೆಗಳು ಓದಲ್ಪಡುವವು. ಅಂತಾ ನಿಬಂಧನೆಗಳ ದೆಸೆಯಿಂದ ದರೋಬಸ್ತು ದರಖಾಸ್ತುದಾರರೂ ಬದ್ಧರಾಗತಕ್ಕದ್ದು.

ಷರಾ—ವರ್ತಕರ ಅನುಕೂಲಕ್ಕೋಸ್ಕರ ಹುಣಸೂರು ಶ್ರೀರಂಗಪಟ್ಣ ಈ ಉಭಯಸ್ಥಳಗಳ ಆಸ್‌ಪಾಸ್ ಕೋಠೀಗಳಲ್ಲಿ ಯೂ ಹರಾಜ್‌ಗಳು ನವಂಬರ್ 8ಕ್ಕೆ ಖೈದಾಗುವಂತೆ ನಡಿಸಲ್ಪಡುವದು. ಹುಣಸೂರು ಕೋಠೀಯಲ್ಲಿ ಕ್ರಯವಾಡಲ್ಪಟ್ಟ ಮರಕ್ಕೆ ಕೊಡತಕ್ಕ ಸೇಕಡಾ ಇಪ್ಪತ್ತೈದು ಬಾಬತು ಡಿಪಾಜಿಟ್ ವೊಬಲಗ್ ಸದರೀ ವೇರೆ ಶ್ರೀರಂಗಪಟ್ಣ ಕೋಠೀಯಬಗೆ ಡಿಪಾಜಿಟ್ ಸಲ್ಲಬೇಕಾದಕಾಲಕ್ಕೆ ಸಮನಾಗಿ ಅಂದರೆ 1876ನೇ ನವಂಬರು 11ನೇ ಮುಕ್ತಂ ಸಾಯಂಕಾಲ 4 ಘಂಟೆಗೆ ಮುಂದಾಗಿಯೇ ಸಲ್ಲಬೇಕಾಗುತದೆ. ಸದರೀ ಉಭಯ ಹರಾಜ್‌ಗಳ ಬಾಬತು ಪೂರಾವೊಬಲಗ್ 1877ನೇ ಇಸವೀ ಫೆಬ್ರುವರಿ 6ನೇ ಮುಕ್ತಂ ಸಾಯಂಕಾಲ 4 ಘಂಟೆಗೆ ಮುಂದಾಗಿ ಸಲ್ಲಬೇಕಾಗುತ್ತೆ.

ವಿಕ್ರಯಿಸಲ್ಪಡುವ ದರೋಬಸ್ತು ಮರವೂ ವಿಕ್ರಯಿಸಲ್ಪಟ್ಟು, ಇದುವರಿಗೆ ನಡೆಯುತಿದ್ದ ಹಾಗೆ, ಖಂಡಿ, ಮಣ, ಕೇರು, ತೊಲೆ, ಪ್ರಕಾರ ತಯಾರಾಗುವದಕ್ಕೆ ಬದಲಾಗಿ ಬೀಟ್ಸ್, ಪಾಂಡ್, ಹಂಡ್ರೆಡ್ ವಯಿಟ್ ಟ್ನ್‌ಗಳ ವೇರೆ ತೂಕ ಮಾಡಿಕೊಡಲ್ಪಡುವದು.

G. J. VAN SOMEREN, *Captain,*
Conservator of Forests, Mysore & Coorg.

BANGALORE DISTRICT.

ಬೆಂಗಳೂರು ಡಿಸ್ಟ್ರಿಕ್ಟ್.

ತಾರೀಖು 11ನೇ. ಅಕ್ಟೋಬರ್ 1876.

ಸಕಲಜನಗಳಿಗೂ ತಿಳಿಯುವ ಬಗ್ಗೆ ಯಿದರಿಂದ ತಿಳಿಸಲ್ಪಡುವದೇನಂದರೆ,—(ಫಾರೆಸ್ಟ್ ಯಿಲಾಖೆಗೆ ಸೇರಿದ ಜಂಗ್ಲೀಗಳು ಶಿವಾಯಿ) ಬೆಂಗಳೂರು ಡಿಸ್ಟ್ರಿಕ್ಟ್ ಜಂಗ್ಲೀಗಳ ಬಾಬತು ಅರಗಿನ ಕಂಟ್ರಾಕ್ಟ್ 1877—78,—1878—79,—1879—80,—1880—81, ಮತ್ತು 1881—82ನೇ ಇಸವೀಗಳಿಗೆ ಅಂದರೆ, 1877ನೇ ಏಪ್ರೆಲ್ 1ನೇ ಮುಕ್ತಂ ಲಗಾಯತ್ 1882ನೇ ಮಾರ್ಚಿ 31ರ ವರಿಗೆ ಡಿಸ್ಟ್ರಿಕ್ಟ್ ವಾರಾಗಿ ಚಡ್ ದರಖಾಸ್ತು ದಾರ್‌ರಿಗೆ ಹರಾಜ್ ಮೂಲಕ 1877ನೇ ಮಾರ್ಚಿ 10ನೇ ಮುಕ್ತಂ 12 ಘಂಟೆಗೆ ಬೆಂಗಳೂರು ಡಿಸ್ಟ್ರಿಕ್ಟ್ ಆಫಿಸ್‌ನಲ್ಲಿ ವಿಕ್ರಯಿಸಲ್ಪಡುವದು.

2. ಐದು ವರುಷಗಳ ವರಿಗೆ, ಆಯಾ ವರುಷದ ಚಡ್ ದರಖಾಸ್ತುದಾರನು, ತನ್ನ ದರಖಾಸ್ತು ಮಂಜೂರಾದ ಮೇಲೆ, ಕರೆನ್ಸೀ ನೋಟ್‌ಗಳು ಯಾ ನಗದುಹಣ. ಆರು ಖಿಸ್ತುಗಳಿಗೆ ಯಾ ಮಾಹೇವಾರೀ ಇನ್‌ಸ್ಟಾಲ್‌ಮೆಂಟ್‌ಗಳಿಗೆ ಸಮನಾದ ಡಿಪಾಜಿಟ್ಟನ್ನು ಹಾಜರ್ ಮಾಡತಕ್ಕದ್ದು. ಅಂತಾ ಪ್ರತಿ ಖಿಸ್ತು ಸಾಲೀಯಾನಾ ದರಖಾಸ್ತು ಮೊಬಲಗ್ ಪೈಕೀ ಹನ್ನೆರಡರಲ್ಲಿ ಒಂದು ಹಿಸ್ಸೆಗೆ ಅಥವಾ ಒಟ್ಟು ಕಂಟ್ರಾಕ್ಟು ಮೊಬಲಗ್ ಪೈಕೀ 60 ರಲ್ಲಿ ಒಂದು ಹಿಸ್ಸೆಗೆ ಸಮನಾಗಿರತಕ್ಕದ್ದು. ಹಾಂಗೆ ಪಾವತೀ ಮಾಡಲಿಕ್ಕೆ ಅವನು ತಪ್ಪಿದಪಕ್ಷಕ್ಕೆ ಸದರೀ ಕಂಟ್ರಾಕ್ಟು ಕೂಡ್ಲೆ ಪುನಶ್ಚ ಹರಾಜ್ ಹಾಕಲ್ಪಟ್ಟು ಆಮೂಲಕ ಸರ್ಕಾರಕ್ಕೆ ಬರುವ ನುಕ್ಸಾನಿಗೆ ಅವನನ್ನು ಗುರಿಮಾಡಲಾಧೀತು.